ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(6)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 21/1/21

# ಜೆಡಿಎಸ್‌ಗೆ ಸಭಾಪತಿ ಸ್ಥಾನ ಸಿಗಲಿದೆ: ಹೊರಟ್ಟಿ

ಬೆಂಗಳೂರು: ಈ ಬಾರಿ ಜೆಡಿಎಸ್‌ಗೆ ಸಭಾಪತಿ ಸ್ಥಾನ ಸಿಗಲಿದೆ. ಪಕ್ಷದ ವರಿಷ್ಠರಾದ ಎಚ್.ಡಿ.ದೇವೇಗೌಡರು ನನ್ನನ್ನು ಸಭಾಪತಿ ಮಾಡುವ ತೀರ್ಮಾನ ಕೈಗೊಂಡಿದ್ದಾರೆ. ಜೆಡಿಎಸ್‌ಗೆ ಸಭಾಪತಿ ಸ್ಥಾನ ನೀಡಬೇಕು. ನಾವೇನೂ ಸನ್ಯಾಸಿಗಳಲ್ಲ ಎಂದು ವಿಧಾನ ಪರಿಷತ್ ಹಿರಿಯ ಸದಸ್ಯರಾದ ಜೆಡಿಎಸ್‌ನ ಬಸವರಾಜ ಹೊರಟ್ಟಿ ಹೇಳಿದರು.



ಸುದ್ದಿಗಾರರಿಗೆ ಪ್ರತಿಕ್ರಿಯಿಸಿ, ಜೆಡಿಎಸ್‌ಗೆ ಸಭಾಪತಿ ಸ್ಥಾನ ಸಿಗಲಿದೆ. ನನ್ನನ್ನು ಸಭಾಪತಿ ಮಾಡಲು ದೇವೇಗೌಡರು ತೀರ್ಮಾನಿಸಿದ್ದಾರೆ. ಬಿಜೆಪಿಯಲ್ಲೂ ಸಭಾಪತಿ ಸ್ಥಾನಕ್ಕೆ ಆಕಾಂಕ್ಷಿಗಳಿರಬಹುದು. ಪರಿಷತ್‌ನಲ್ಲಿ 31 ಸದಸ್ಯ ಬಲವಿರುವ ಬಿಜೆಪಿಯವರು ಸಭಾಪತಿ ಸ್ಥಾನ ತಮಗೇ ಬೇಕು ಎಂದರೆ ನಾವೂ 14 ಸದಸ್ಯರಿದ್ದೇವೆ. ಏನೇ ಮಾಡಬೇಕಿದ್ದರೂ ನಮ್ಮ ಬೆಂಬಲ ಅಗತ್ಯವಲ್ಲವೇ ಎಂದು ತಿಳಿಸಿದರು.

**ಜನತಾ ಪರಿವಾರ ಒಗ್ಗೂಡಿಸಲು ಪ್ರಯತ್ನ:** ಜನತಾ ಪರಿವಾರವನ್ನು ಒಗ್ಗೂಡಿಸಲು ಮುಂದಾಗಿದ್ದೇವೆ. ಮಧು ಬಂಗಾರಪ್ಪ ಅವರ ಮನವೊಲಿಕೆ ಮಾಡುತ್ತೇವೆ. ಹಾಗೆಯೇ ಜಿ.ಟಿ.ದೇವೇಗೌಡರನ್ನು ಭೇಟಿ ಮಾಡುತ್ತೇವೆ. ಶಾಸಕ ಎಸ್. ಆರ್. ಶ್ರೀನಿವಾಸ್ ಸೇರಿದಂತೆ ಅಸಮಾಧಾನಿತ ಎಲ್ಲರ ಮನವೊಲಿಕೆ ಮಾಡುತ್ತೇವೆ ಎಂದು ತಿಳಿಸಿದರು.